ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಜಟಿಇ/03/ಇಸಿಎಸ್(1)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
Email:dte.commissioner@gmail.com
ದಿನಾಂಕ: 25.03.2024

## ಸುತ್ತೋಲೆ

ವಿಷಯ: 2023-24ರ ಶೈಕ್ಷಣಿಕ ವೇಳಾಪಟ್ಟಿಯಂತೆ ಎಲ್ಲಾ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಪಠ್ಯಕ್ರಮದನುಸಾರ ತರಗತಿಗಳನ್ನು ನಡೆಸಿ ನಿಗದಿತ ಅವಧಿಯಲ್ಲಿ ಪಾಠ ಪ್ರವಚನಗಳನ್ನು ಪೂರ್ಣಗೊಳಿಸುವ ಬಗ್ಗೆ

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: DTE-ADMI0ACM2/61/2023 ದಿ:20.10.2023

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಈ ಕಛೇರಿ ಸುತ್ತೋಲೆಯನ್ವಯ 2023-24ರ ಶೈಕ್ಷಣಿಕ ಸಾಲಿನ ಡಿಪ್ಲೋಮ ಹಗಲು ಪಾಲಿಟೆಕ್ನಿಕ್‌ಗಳ 02, 04 &06ನೇ ಸೆಮಿಸ್ಟರ್ ಮತ್ತು 01, 03 &05ನೇ ಸೆಮಿಸ್ಟರ್ ಪಾರ್ಟ್‌ಟೈಂ ಡಿಪ್ಲೋಮ ತರಗತಿಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ. ಪ್ರಯುಕ್ತ ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಸದರಿ ವೇಳಾಪಟ್ಟಿಯಂತೆ ವಿದ್ಯಾರ್ಥಿಗಳಿಗೆ ತರಗತಿಗಳನ್ನು ನಡೆಸಿ ನಿಗದಿತ ದಿನಾಂಕ:30.04.2024 ರೊಳಗೆ ಪಾಠ ಪ್ರವಚನಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮವಹಿಸುವಂತೆ ಹಾಗೂ ಈಗಾಗಲೇ ಪ್ರಕಟಿಸಲಾಗಿರುವ ಪರೀಕ್ಷಾ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ -ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ:
1. ಇ-ಗವರ್ನೆನ್ಸ್ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2. ಗಣಕ ಕೇಂದ್ರ – ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
3. ಕಾರ್ಯದರ್ಶಿಯವರ ಆಪ್ತಶಾಖೆ